ಇ) ಗುರ್ತಿಸಿರುವ ಎಲ್ಲಾ ಹಳ್ಳಿಗಳ ನೀರನ್ನು ಉಪಯೋಗಿಸಿಕೊಂಡಾಗ ಇನ್ನು ಎಷ್ಟು ನೀರನ್ನು ಪಡೆಯಬಹುದಾಗಿ ಅದರಿಂದ ಎಷ್ಟು ಎಕರೆ ಪ್ರದೇಶವನ್ನು ಅಚ್ಚುಕಟ್ಟಿಗೆ ತರಬಹುದು?

ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು) –

ಅ) ರಾಜ್ಯದಲ್ಲಿ ಸಣ್ಣ ನೀರಾವರಿಗಾಗಿ 240.93 ಟಿ.ಎಂ.ಸಿ. ನೀರನ್ನು ಉಪಯೋಗಿಸುತ್ತಿದ್ದೇವೆ.
ಆ) ಇದರಿಂದ 22,28,264 ಎಕರೆ ಪ್ರದೇಶ ನೀರಾವರಿಗೆ ಒಳಪಟ್ಟಿದೆ.
ಇ) ಗುರ್ತಿಸಿರುವ ಎಲ್ಲಾ ಹಳ್ಳಗಳನ್ನು ಉಪಯೋಗಿಸಿಕೊಂಡಲ್ಲಿ 39.91 ಟಿ.ಎಂ.ಸಿ. ನೀರನ್ನು ಪಡೆಯಬಹುದು. ಇದರಿಂದ 2,41,733 ಎಕರೆ ಪ್ರದೇಶವನ್ನು ಅಚ್ಚು ಕಟ್ಟಿಗೆ ತರಬಹುದು.

## ಪ್ರವಾಸಿ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು

931. ಶ್ರೀ ಜಿ. ರಾಜುಗೌಡ (ಹನೂರು) : ಮಾನ್ಯ ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ರಾಜ್ಯದಲ್ಲಿ ಎಷ್ಟು ಪ್ರವಾಸಿ ಕೇಂದ್ರಗಳನ್ನು ಗುರುತಿಸಲಾಗಿದೆ. 1992–93 ರಲ್ಲಿ ಅಭಿವೃದ್ಧಿಪಡಿಸುವುದಕ್ಕಾಗಿ ಯಾವ ಯಾವ ಕೇಂದ್ರಗಳನ್ನು ಆಯ್ಕೆ ಮಾಡಲಾಗಿದೆ ;
ಆ) ಪ್ರವಾಸಿ ಕೇಂದ್ರಗಳನ್ನು ಅಭಿವೃದ್ಧಿ ಪಡಿಸಲು ಕೇಂದ್ರದ ಪಾಲು ಹಾಗೂ ರಾಜ್ಯದ ಪಾಲು ಎಷ್ಟು?

ಶ್ರೀ ಕೆ. ಶಿವಮೂರ್ತಿ (ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು) –

ಅ) ರಾಜ್ಯದಲ್ಲಿ 200 ಕ್ಕೂ ಹೆಚ್ಚು ಸ್ಥಳಗಳನ್ನು ಪ್ರೇಕ್ಷಣೀಯ ಸ್ಥಳಗಳೆಂದು ಇಲಾಖೆ ಈವರೆವಿಗೆ ಗುರುತಿಸಿದೆ.
1992–93ನೇ ಸಾಲಿನಲ್ಲಿ ಅಭಿವೃದ್ಧಿಪಡಿಸಲು ಕೇಂದ್ರಗಳನ್ನು ಆಯ್ಕೆ ಮಾಡಬೇಕಾಗಿದೆ.
ಆ) ಪ್ರಸ್ತುತ ಜಾರಿಯಲ್ಲಿರುವ ಕೇಂದ್ರ ಪುರಸ್ಕೃತ ಯೋಜನೆ ರೀತ್ಯ ಅನುಮೋದಿತ ಯೋಜನೆಗಳಿಗೆ ಕೇಂದ್ರದ ಪಾಲು ಶೇಕಡ 80, ರಾಜ್ಯದ ಪಾಲು ಶೇಕಡ 20.

## ಹೊಸದುರ್ಗ ತಾಲ್ಲೂಕಿನಲ್ಲಿರುವ ಮೈನರ್ ಕೆರೆಗಳ ಸಂಖ್ಯೆ

20. ಶ್ರೀ ಇಳ್ಳಲ್ ವಿಜಯಕುಮಾರ್ (ಹೊಸದುರ್ಗ) :– ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಚಿತ್ರದುರ್ಗ ಜಿಲ್ಲೆ, ಹೊಸದುರ್ಗ ತಾಲ್ಲೂಕಿನಲ್ಲಿರುವ ಮೈನರ್ ಕೆರೆಗಳ ಸಂಖ್ಯೆ ಎಷ್ಟು;
ಆ) ಈ ಕೆರೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರವು ಉದ್ದೇಶಿಸಿದೆಯೇ;
ಇ) ಹೊಸದುರ್ಗ ತಾಲ್ಲೂಕು ಮಾಡದಕೆರೆ ಹೋಬಳಿ ಕಟ್ಟದಹಳ್ಳಿ ಕೆರೆಯ ಅಭಿವೃದ್ಧಿಗೆ ಖರ್ಚಾಗಿರುವ ಹಣವೆಷ್ಟು ;
ಈ) ಸದರಿ ಕೆರೆಯ ವ್ಯಾಪ್ತಿಗೆ ಬರುವ ಅಚಕಟ್ಟು ಪ್ರದೇಶದ ಜಮೀನಿನ ವಿಸ್ತೀರ್ಣವೆಷ್ಟು?

ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ಸಚಿವರು) –

ಅ) 49 ಕೆರೆಗಳು
ಆ) ಹೌದು ಪ್ರತಿ ಸಾಲಿನಲ್ಲಿ ಕೆರೆಗಳ ಅಭಿವೃದ್ಧಿಗಾಗಿ ಯೋಜನೇತರ ಶೀರ್ಷಿಕೆಯಡಿಯಲ್ಲಿ ಒದಗಿಸಿರುವ ಅನುದಾನಕ್ಕೆ ಸೀಮಿತಗೊಳಿಸಿ, ಅತ್ಯಾವಶ್ಯಕವಾಗಿ ಆಗಬೇಕಾದ ಕೆರೆಗಳ ಅಭಿವೃದ್ಧಿಯನ್ನು ಕೈಗೊಳ್ಳಲಾಗುತಿದೆ.